ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಮಂಗಳವಾರ, ದಿನಾಂಕ: 29ನೇ ಸೆಪ್ಟೆಂಬರ್, 2020

ಕರ್ನಾಟಕ ರಾಜ್ಯವು ಕೈಗಾರಿಕಾ ವಲಯದಲ್ಲಿ ಬಂಡವಾಳ ಆಕರ್ಷಣೆಯಲ್ಲಿ ತೀವ್ರ ಹಿನ್ನಡೆ ಬಗ್ಗೆ

ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು)-

98 (1049) ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 3 ವರ್ಷಗಳ ಅವಧಿಯಲ್ಲಿ ಕೈಗಾರಿಕಾ ಕ್ಷೇತ್ರಕ್ಕೆ ಹೊರ ರಾಜ್ಯ, ವಿದೇಶಗಳಿಂದ ಹರಿದು ಬಂದಿರುವ ಬಂಡವಾಳ ಎಷ್ಟು; (ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ರಾಜ್ಯದ ಯಾವ ಯಾವ ಭಾಗಗಳಲ್ಲಿ ಯಾವ ಕೈಗಾರಿಕಾ ಕ್ಷೇತ್ರದಲ್ಲಿ ಬಂಡವಾಳ ಹೂಡಿಕೆಯಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಇತ್ತೀಚಿನ ದಿನಗಳಲ್ಲಿ ಕೈಗಾರಿಕಾ ವಲಯದಲ್ಲಿ ಬಂಡವಾಳ ಹೂಡಿಕೆಯಲ್ಲಿ ತೀವ್ರ ಹಿನ್ನಡೆಯಾಗಿ 2019ರ ರ್ಯಾಂಕಿಂಗ್‌ನಲ್ಲಿಯೂ ತೀವ್ರ ಕುಸಿತ ಕಂಡಿರುವ ಅಂಶವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ; ಹಾಗಿದ್ದಲ್ಲಿ ಪುನಃಶ್ಚೇತನ ದೃಷ್ಟಿಯಿಂದ ಕೈಗೊಂಡ ಕ್ರಮಗಳ ಬಗ್ಗೆ ಮಾಹಿತಿ ಒದಗಿಸುವುದು;

(ಈ) ಕರ್ನಾಟಕ ರಾಜ್ಯವು ಉದ್ಯಮ ಸ್ನೇಹಿ ರಾಜ್ಯವಾಗಿ ಉನ್ನತ ಶ್ರೇಯಾಂಕದಲ್ಲಿದ್ದರೂ ತೀವ್ರ ಕುಸಿತಕ್ಕೆ ಕಾರಣ ಏನು? (ಮಾಹಿತಿ ಒದಗಿಸುವುದು)